ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

8

ಇಲಾಖೆ / ವಿಷಯ : DEPARTMENT / SUBJECT: ಲೋಕಾಯುಕ್ತ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE 22/10/20

# ಲೋಕಾಯುಕ್ತರೇ ಆಸ್ತಿ ವಿವರ ಸಲ್ಲಿಸಿಲ್ಲ

ವಿಶ್ವವಾಣಿ 22/10/20

## 148 ಶಾಸಕರು, ಏಳೆಂಟು ಸಚಿವರಿಂದಲೂ ಈ ವರ್ಷ ಆಸ್ತಿ ವಿವರ ಸಲ್ಲಿಕೆಯಾಗಿಲ್ಲ



**ಬೆಂಗಳೂರು:** ರಾಜ್ಯದಲ್ಲಿ ಪಾರದರ್ಶಕ ಆಡಳಿತ ಹಾಗೂ ಭ್ರಷ್ಟಾಚಾರಕ್ಕೆ ತಡೆಯೊಡ್ಡಲು ಕರ್ನಾಟಕ ಲೋಕಾಯುಕ್ತರಿಗೆ ಜನಪ್ರತಿನಿಧಿಗಳು ಪ್ರತಿವರ್ಷದ ಆಸ್ತಿ ವಿವರವನ್ನು ಸಲ್ಲಿಸಬೇಕು. ಆದರೆ ಆಸ್ತಿ ವಿವರವನ್ನು ಸಂಗ್ರಹಿಸುವ ಲೋಕಾಯುಕ್ತರೇ ಇಲ್ಲಿಯವರೆಗೂ ಆಸ್ತಿ ವಿವರ ಸಲ್ಲಿಸಿಲ್ಲ.

ಹೌದು, ಪ್ರತಿವರ್ಷ ಜೂನ್‌ನಲ್ಲಿ ರಾಜ್ಯದ ಎಲ್ಲ ಜನಪ್ರತಿನಿಧಿಗಳು ತಮ್ಮ ಆಸ್ತಿ ವಿವರವನ್ನು ಲೋಕಾಯುಕ್ತರಿಗೆ ಸಲ್ಲಿಸಬೇಕು. ಆದರೆ ಈ ರೀತಿ ಆಸ್ತಿ ವಿವರವನ್ನು ಪಡೆಯುವ ಲೋಕಾಯುಕ್ತರು ಹಾಗೂ ಉಪಲೋಕಾಯುಕ್ತರು ತಮ್ಮ ಆಸ್ತಿ ವಿವರ ಸಲ್ಲಿಸಲೇಬೇಕು ಎನ್ನುವ ನಿಯಮವಿಲ್ಲ. ಆದರೆ ನೈತಿಕತೆಯಿಂದಾದರೂ ತಮ್ಮ ಆಸ್ತಿ ವಿವರವನ್ನು ಬಹಿರಂಗಗೊಳಿಸಬೇಕು ಎನ್ನುವ ಮಾತುಗಳು ಕೇಳಿಬಂದಿವೆ. → 4

### ಆಸ್ತಿ ವಿವರ ಬಹಿರಂಗಗೊಳಿಸುವಂತೆ ಹೈಕೋರ್ಟ್ ಆದೇಶ

ಲೋಕಾಯುಕ್ತರು ಪ್ರತಿವರ್ಷ ಆಸ್ತಿ ವಿವರ ಸಲ್ಲಿಸಬೇಕು ಎನ್ನುವ ಬಗ್ಗೆ ಸ್ಪಷ್ಟ ಮಾಹಿತಿಯಿಲ್ಲ. ಆದರೆ ಈ ಹಿಂದಿನ ಲೋಕಾಯುಕ್ತರಾಗಿದ್ದ ಸಂತೋಷ್ ಹೆಗ್ಡೆ ಅವರು ತಮ್ಮ ಆಸ್ತಿ ವಿವರವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುತ್ತಿದ್ದರು. ಇದರೊಂದಿಗೆ ಹೈಕೋರ್ಟ್ ಸಹ ನ್ಯಾಯಾಧೀಶರು ಹಾಗೂ ಅವರ ಕುಟುಂಬ ಸದಸ್ಯರ ಆಸ್ತಿ ವಿವರವನ್ನು ಬಹಿರಂಗಗೊಳಿಸಬೇಕು ಎನ್ನುವ ಆದೇಶ ನೀಡಿದೆ.

### ಆಸ್ತಿ ವಿವರ ಸಲ್ಲಿಸದ ಜನಪ್ರತಿನಿಧಿಗಳು

**ಸಚಿವರು**

- ಮಾಧುಸ್ವಾಮಿ ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವ
- ಜಗದೀಶ್ ಶೆಟ್ಟರ್ ಕೈಗಾರಿಕಾ ಸಚಿವ
- ಶ್ರೀರಾಮುಲು ಸಮಾಜ ಕಲ್ಯಾಣ ಇಲಾಖೆ
- ಕೆ.ಎಸ್.ಈಶ್ವರಪ್ಪ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ
- ಎಚ್.ನಾಗೇಶ್ ಅಬಕಾರಿ ಸಚಿವ
- ಕೆ.ಗೋಪಾಲಯ್ಯ ಆಹಾರ ಸಚಿವ
- ಬಿ.ಸಿ.ಪಾಟೀಲ್ ಕೃಷಿ ಸಚಿವ
- ಕೋಟ ಶ್ರೀನಿವಾಸ ಪೂಜಾರಿ ಮುಜರಾಯಿ ಸಚಿವ

**ಶಾಸಕರು**

- ಸಿದ್ದರಾಮಯ್ಯ, ಪ್ರತಿಪಕ್ಷ ನಾಯಕ
- ಎಂ.ಪಿ.ರೇಣುಕಾಚಾರ್ಯ, ಸಿಎಂ ರಾಜಕೀಯ ಕಾರ್ಯದರ್ಶಿ
- ಎಸ್.ಆರ್. ವಿಶ್ವನಾಥ್, ಸಿಎಂ ರಾಜಕೀಯ ಕಾರ್ಯದರ್ಶಿ
- ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ
- ದಿನೇಶ್ ಗುಂಡೂರಾವ್
- ಡಾ.ಜಿ.ಪರಮೇಶ್ವರ್
- ರಾಮಲಿಂಗಾರೆಡ್ಡಿ
- ಎಸ್.ಆರ್.ಪಾಟೀಲ್
- ಎಚ್.ಡಿ.ರೇವಣ್ಣ
- ಯು.ಟಿ.ಖಾದರ್
- ಜಮೀರ್ ಅಹಮದ್
- ಸಿಎಂ ಇಬ್ರಾಹಿಂ
- ಸತೀಶ್ ಜಾರಕಿಹೊಳಿ
- ಅಂಜಲಿ ನಿಂಬಾಳ್ಕರ್